# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ:- ಡಾ|| ಬಿ.ಆರ್.ಅಂಬೇಡ್ಕರ್ ಅಭಿವೃದ್ಧಿ ನಿಗಮವು ಅನುಷ್ಠಾನಗೊಳಿಸುತ್ತಿರುವ ಸ್ವಯಂ ಉದ್ಯೋಗ ಯೋಜನೆ, ಹೈನುಗಾರಿಕೆ ಮತ್ತು ಉದ್ಯಮಶೀಲತಾ ಅಭಿವೃದ್ಧಿ ಯೋಜನೆಗಳನ್ನು ಖಾಸಗಿ ಬ್ಯಾಂಕುಗಳ ಮೂಲಕ ಅನುಷ್ಠಾನಗೊಳಿಸುವ ಬಗ್ಗೆ.

Copy to all districts

ಓದಲಾಗಿದೆ:- ಡಾ||ಬಿ.ಆರ್.ಅಂಬೇಡ್ಕರ್ ಅಭಿವೃದ್ಧಿ ನಿಗಮ, ಬೆಂಗಳೂರು ಇವರ ಏಕ ಕಡತ ಸಂಖ್ಯೆ: ಡಾ|| ಬಿ.ಆರ್.ಅಂಅನಿ / ಕೈತ / ರಾಷ್ಟ್ರೀಬ್ಯಾವಿ-49/ 2017-18, ದಿನಾಂಕ:04-07-2017.

****

## ಪ್ರಸ್ತಾವನೆ:-

ಡಾ||ಬಿ.ಆರ್.ಅಂಬೇಡ್ಕರ್ ಅಭಿವೃದ್ಧಿ ನಿಗಮವು ಸ್ವಯಂ ಉದ್ಯೋಗ ಯೋಜನೆ, ಹೈನುಗಾರಿಕೆ ಮತ್ತು ಉದ್ಯಮಶೀಲತಾ ಅಭಿವೃದ್ಧಿ ಯೋಜನೆಗಳನ್ನು ಪ್ರಸ್ತುತ ರಾಷ್ಟ್ರೀಕೃತ ಬ್ಯಾಂಕುಗಳ ಸಹಯೋಗದೊಡನೆ ಅನುಷ್ಠಾನಗೊಳಿಸುತ್ತಿದೆ. ಈ ಯೋಜನೆಯಡಿ ವಿವಿಧ ಆರ್ಥಿಕ ಚಟುವಟಿಕೆಗಳನ್ನು ಕೈಗೊಳ್ಳಲು ವಿಶೇಷವಾಗಿ ಗುಡಿ ಕೈಗಾರಿಕೆ, ಸೇವಾ ವ್ಯಾಪ್ತಿಯ ವಾಹನಗಳ ಖರೀದಿ ಉದ್ದೇಶಗಳಿಗೆ ಸಾಲ-ಸೌಲಭ್ಯವನ್ನು ಪರಿಶಿಷ್ಟ ಜಾತಿಯ ಫಲಾಪೇಕ್ಷಿಗಳನ್ನು ಕೈಗಾರಿಕೋದ್ಯಮಿ ಮತ್ತು ವಾಹನಗಳ ಮಾಲೀಕರನ್ನಾಗಿಸುವುದರ ಜೊತೆಗೆ ಅವರ ಆರ್ಥಿಕ ಸಾಮರ್ಥ್ಯ ಅಭಿವೃದ್ಧಿಯನ್ನು ಬಲಗೊಳಿಸುವ ಕಾರ್ಯಕ್ರಮಗಳನ್ನು ರಾಷ್ಟ್ರೀಕೃತ ಬ್ಯಾಂಕ್‌ಗಳ ಮೂಲಕ ಅನುಷ್ಠಾನಗೊಳಿಸಲಾಗುತ್ತಿದೆ. ಸದರಿ ಯೋಜನೆಯಡಿ ವರ್ಷಕ್ಕೆ 800 ರಿಂದ 1000 ಫಲಾಪೇಕ್ಷಿಗಳಿಗೆ ವಾಹನ ಒದಗಿಸಲಾಗುತ್ತಿದೆ. ಪ್ರಸ್ತುತ 2017-18ನೇ ಸಾಲಿನ ಆಯವ್ಯಯ ಭಾಷಣದಲ್ಲಿ ವಾಹನ ಚಾಲನಾ ತರಬೇತಿ ಹಾಗೂ ಕೌಶಲ್ಯ ತರಬೇತಿ ಪಡೆದ ಫಲಾಪೇಕ್ಷಿಗಳಿಗೆ ಸಾಲ-ಸೌಲಭ್ಯ ಕಲ್ಪಿಸಲು ಹೊಸ ಯೋಜನೆಯನ್ನು ಘೋಷಿಸಲಾಗಿದೆ. ಈ ಯೋಜನೆಗಳ ಅನುಷ್ಠಾನದಲ್ಲಿ ಬ್ಯಾಂಕ್‌ಗಳ ಪಾತ್ರವು ಅತ್ಯಂತ ಮಹತ್ವದಾಗಿರುತ್ತದೆ. ಡಾ||ಬಿ.ಆರ್.ಅಂಬೇಡ್ಕರ್ ಅಭಿವೃದ್ಧಿ ನಿಗಮವು ಕೈಗೆತ್ತಿಕೊಂಡಿರುವ ಸದರಿ ಯೋಜನೆಗಳನ್ನು ರಾಷ್ಟ್ರೀಕೃತ ಬ್ಯಾಂಕ್‌ಗಳ ಸಹಯೋಗದೊಂದಿಗೆ ಅನುಷ್ಠಾನಗೊಳಿಸುತ್ತಿದ್ದರೂ ನಿರೀಕ್ಷಿತ ಮಟ್ಟದ ಪ್ರಗತಿ ಕಂಡು ಬಂದಿರುವುದಿಲ್ಲ. ಆದುದರಿಂದ ರಾಷ್ಟ್ರೀಕೃತ ಬ್ಯಾಂಕ್‌ಗಳ ಜೊತೆಗೆ ಇತರೆ ಬ್ಯಾಂಕ್‌ಗಳಾದ ಐ.ಸಿ.ಐ.ಸಿ.ಐ, ಆಕ್ಸಿಸ್ ಬ್ಯಾಂಕ್, ಕೋಟೆಕ್ ಮಹೇಂದ್ರ ಬ್ಯಾಂಕ್, ಐ.ಡಿ.ಬಿ.ಐ ಹಾಗೂ ಹೆಚ್.ಡಿ.ಎಫ್.ಸಿ, ಲಕ್ಷ್ಮೀ ವಿಲಾಸ್ ಬ್ಯಾಂಕ್‌ಗಳನ್ನು ತೊಡಗಿಸಿಕೊಂಡು ಸದರಿ ಯೋಜನೆಗಳನ್ನು ತ್ವರಿತವಾಗಿ ಹಾಗೂ ಗರಿಷ್ಠ ಮಟ್ಟದಲ್ಲಿ ಪ್ರಗತಿ ಸಾಧಿಸುವ ದೃಷ್ಟಿಯಿಂದ ಸದರಿ ಖಾಸಗಿ ಬ್ಯಾಂಕ್‌ಗಳ ಮೂಲಕವು ಅನುಷ್ಠಾನಗೊಳಿಸುವ ಬಗ್ಗೆ ದಿನಾಂಕ:20.10.2017ರಂದು ನಡೆದ 214ನೇ ನಿರ್ದೇಶಕ ಮಂಡಳಿ ಸಭೆಯಲ್ಲಿ ನಿರ್ಣಯಿಸಲಾಗಿರುತ್ತದೆ. ಆದ್ದರಿಂದ ಮೇಲೆ ಹೇಳಿದ ಬ್ಯಾಂಕ್ ಲಿಂಕ್ಡ್ ಯೋಜನೆಗಳನ್ನು ರಾಷ್ಟ್ರೀಕೃತ ಬ್ಯಾಂಕ್‌ಗಳಲ್ಲದೇ ಖಾಸಗಿ ಬ್ಯಾಂಕ್‌ಗಳ ಮೂಲಕ ಅನುಷ್ಠಾನಗೊಳಿಸಲು ಆದೇಶ ಹೊರಡಿಸುವಂತೆ ಮೇಲೆ ಓದಲಾದ ಏಕಕಡತದ ದಿನಾಂಕ:04.07.2017ರ ಪ್ರಸ್ತಾವನೆಯಲ್ಲಿ ವ್ಯವಸ್ಥಾಪಕ ನಿರ್ದೇಶಕರು, ಡಾ||ಬಿ.ಆರ್.ಅಂಬೇಡ್ಕರ್ ಅಭಿವೃದ್ಧಿ ನಿಗಮ, ಬೆಂಗಳೂರು ಇವರು ಕೋರಿರುತ್ತಾರೆ.

...2

Scanned with OKEN Scanner

ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿದ ಸರ್ಕಾರವು ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಸಕಇ 321 ಎಸ್‌ಡಿಸಿ 2017, ಬೆಂಗಳೂರು, ದಿನಾಂಕ:14/08/2017.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳಿಂದ ಡಾ||ಬಿ.ಆರ್.ಅಂಬೇಡ್ಕರ್ ಅಭಿವೃದ್ಧಿ ನಿಗಮದಿಂದ ಅನುಷ್ಠಾನಗೊಳಿಸುತ್ತಿರುವ ಸ್ವಯಂ ಉದ್ಯೋಗ ಯೋಜನೆ, ಹೈನುಗಾರಿಕೆ ಮತ್ತು ಉದ್ಯಮಶೀಲತಾ ಅಭಿವೃದ್ಧಿ ಯೋಜನೆ ಈ ಬ್ಯಾಂಕ್ ಲಿಂಕ್ಡ್ ಯೋಜನೆಗಳನ್ನು ಪ್ರಸ್ತುತ ಇರುವ ರಾಷ್ಟ್ರೀಕೃತ ಬ್ಯಾಂಕ್‌ಗಳ ಜೊತೆಗೆ ಖಾಸಗಿ ಬ್ಯಾಂಕ್‌ಗಳಾದ ಐ.ಸಿ.ಐ.ಸಿ.ಐ, ಆಕ್ಸಿಸ್ ಬ್ಯಾಂಕ್, ಕೋಟೆಕ್ ಮಹೇಂದ್ರ ಬ್ಯಾಂಕ್, ಐ.ಡಿ.ಬಿ.ಐ., ಹೆಚ್.ಡಿ.ಎಫ್.ಸಿ., ಮತ್ತು ಲಕ್ಷ್ಮೀ ವಿಲಾಸ್ ಬ್ಯಾಂಕ್‌ಗಳಲ್ಲಿ ತೊಡಗಿಸಿಕೊಳ್ಳುವ ಮೂಲಕ ಅನುಷ್ಠಾನಗೊಳಿಸಲು ಆದೇಶಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ.

(ಬಿ.ಎನ್.ಸುಮತಿ) 14/8/17
ಸರ್ಕಾರದ ಅಧೀನ ಕಾರ್ಯದರ್ಶಿ-3,
ಸಮಾಜ ಕಲ್ಯಾಣ ಇಲಾಖೆ.

ಗೆ:-

1. ಮಹಾಲೇಖಪಾಲರು (ಎ & ಇ ಲೆಕ್ಕ ಪರಿಶೋಧನೆ-1, 2), ಕರ್ನಾಟಕ, ಬೆಂಗಳೂರು.
2. ಆಯುಕ್ತರು, ಸಮಾಜ ಕಲ್ಯಾಣ ಇಲಾಖೆ, ಬೆಂಗಳೂರು.
3. ವ್ಯವಸ್ಥಾಪಕ ನಿರ್ದೇಶಕರು, ಡಾ||ಬಿ.ಆರ್.ಅಂಬೇಡ್ಕರ್ ಅಭಿವೃದ್ಧಿ ನಿಗಮ, ಬೆಂಗಳೂರು.
4. ಶಾಖಾ ವ್ಯವಸ್ಥಾಪಕರುಗಳು, ಐ.ಸಿ.ಐ.ಸಿ.ಐ, ಆಕ್ಸಿಸ್ ಬ್ಯಾಂಕ್, ಕೋಟೆಕ್ ಮಹೇಂದ್ರ ಬ್ಯಾಂಕ್, ಐ.ಡಿ.ಬಿ.ಐ, ಹಾಗೂ ಹೆಚ್.ಡಿ.ಎಫ್.ಸಿ, ಲಕ್ಷ್ಮೀ ವಿಲಾಸ್ ಬ್ಯಾಂಕ್, (ವ್ಯವಸ್ಥಾಪಕ ನಿರ್ದೇಶಕರು, ಡಾ||ಬಿ.ಆರ್.ಅಂಬೇಡ್ಕರ್ ಅಭಿವೃದ್ಧಿ ನಿಗಮ, ಬೆಂಗಳೂರು ಇವರ ಮೂಲಕ).
5. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.

****

Scanned with OKEN Scanner